Sub : Stay to construct commercial complex by Shimoga Corporation.

Unstarred L.A. Question No. 766 (1201)

Sri. K.S. Eshwarappa (Shimoga) : Will the Minister for Urban Development, CADA & Hyderabad-Karnataka Development Board be pleased to state.

a. Whether it is a fact that the Government has given temporary stay to construct commercial complex by Shimoga-Bhadravathi City Corporation ?

b. If so, the reasons and when the stay would be removed.

Sri. Vaijanath Patil (Minister for Urban Development, CADA, and Hyderabad-Karnataka Development Board.):

a. Yes.

b. Stay was granted keeping view the overall law and order situation. Government will consider the matter and would take an appropriate decision based on the recommendations of the Deputy Commissioner, Shimoga.

ವಿಷಯ : ಚಿಕ್ಕಬಳ್ಳಾಪುರ ವಿಭಾಗದಲ್ಲಿ ಬೃಹತ್ ಉದ್ದಿಮೆಗಳ ಸ್ಥಾಪನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 768 (1245)

ಶ್ರೀ ಶಿವಾನಂದ (ಚಿಕ್ಕಬಳ್ಳಾಪುರ) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ. ಕೋಲಾರ ಜಿಲ್ಲೆಯ ಚಿಕ್ಕಬಳ್ಳಾಪುರದ ಉಪ ವಿಭಾಗದಲ್ಲಿರುವ ಬೃಹತ್ ಉದ್ದಿಮೆಗಳ ಸಂಖ್ಯೆ ಎಷ್ಟು ?

ಆ. ಹಿಂದುಳಿದ ಈ ಜಿಲ್ಲೆಯ ಉಪ ವಿಭಾಗವನ್ನು ಉದ್ದಿಮೆ ಸ್ಥಾಪಿಸಲು ಸರ್ಕಾರದವರು ಕೈಗೊಂಡಿರುವ ಕ್ರಮವೇನು ?

ಶ್ರೀ. ಆರ್. ವಿ. ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು):

ಅ. 8

ಆ. ಚಿಕ್ಕಬಳ್ಳಾಪುರ ಉಪ ವಿಭಾಗದಲ್ಲಿ ಒಂದು ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸಲಾಗಿದೆ. ಕೆಎಸ್ಎಸ್ಐಡಿಸಿ ವತಿಯಿಂದ ನಾಲ್ಕು ಕೈಗಾರಿಕಾ ವಸಾಹತುಗಳನ್ನು ಸ್ಥಾಪಿಸಲಾಗಿದೆ. ರಾಜ್ಯ ಮಟ್ಟದ ಹಾಗೂ ಜಿಲ್ಲಾ ಮಟ್ಟದ

ಏಕಗವಾಕ್ಷಿ ಸಮಿತಿಯಿಂದ ಭಾವಿ ಉದ್ದಿಮೆದಾರರಿಗೆ ಕೈಗಾರಿಕೆಗಳನ್ನು ಸ್ಥಾಪಿಸಲು ಮುಂದೆ ಬಂದಲ್ಲಿ ಸರ್ಕಾರದ ವತಿಯಿಂದ 1993ನೇ ಸಾಲಿನ ಕೈಗಾರಿಕಾ ನೀತಿಯಂತೆ ಸವಲತ್ತುಗಳನ್ನು ನೀಡಲಾಗುತ್ತಿದೆ. ಹಾಗೂ ವಿದ್ಯುಚ್ಛಕ್ತಿ. ಕೈಗಾರಿಕಾ ಸ್ಥಳ, ಪೂರಕ ವ್ಯವಸ್ಥೆಗಳನ್ನು ನೀಡಲಾಗುತ್ತಿದೆ. ಉದ್ದಿಮೆದಾರರಿಗೆ ಉದ್ಯಮಶೀಲತಾ ಕಾರ್ಯಕ್ರಮ ಏರ್ಪಡಿಸಲಾಗುತ್ತಿದೆ ಹಾಗೂ ಅವಶ್ಯವಿದ್ದಲ್ಲಿ ತರಬೇತಿಯನ್ನೂ ಸಹ ನೀಡಲಾಗುತ್ತಿದೆ.

ವಿಷಯ : ಧಾರವಾಢ - ಹುಬ್ಬಳ್ಳಿ ಮಹಾನಗರದಲ್ಲಿ ಮೂಲ ಭೂತ ಸೌಲಭ್ಯಗಳಾದ ಕುಡಿಯುವ ನೀರು ಒಳಚರಂಡಿ ವಗೈರೆ ಕೊರತೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 770 (960)

ಶ್ರೀ ಚಂದ್ರಕಾಂತಬೆಲ್ಲದ್ (ಧಾರಾವಾಡ ಗ್ರಾಮಾಂತರ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ. ಧಾರವಾಡ-ಹುಬ್ಬಳ್ಳಿ ಮಹಾನಗರದಲ್ಲಿ ಮೂಲಭೂತ ಸೌಲಭ್ಯಗಳ (ಕುಡಿಯುವ ನೀರು ಒಳಚರಂಡಿ ಹಾಗೂ ರಸ್ತೆ ಇತ್ಯಾದಿ) ಕೊರತೆಯಿಂದಾಗಿ ಜನತೆ ಚಳುವಳಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ?

ಆ. ಈ ಸಮಸ್ಯೆಯ ಪರಿಹಾರಕ್ಕೆ 1988-89ರಲ್ಲಿ ವಿಶ್ವಬ್ಯಾಂಕ್‌ನಿಂದ ಸಾಲ ಪಡೆಯಲಾಗಿದೆಯೇ ? ವಿವರ ತಿಳಿಸುವುದು.

ಇ. ಈ ಮಹಾನಗರ ಕಳೆದ ಹತ್ತು ವರ್ಷಗಳಲ್ಲಿ ಶೀಘ್ರವಾಗಿ ಬೆಳೆಯುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಈ. ಈ ಸೌಲಭ್ಯಗಳನ್ನು ಒದಗಿಸಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು ?

ಶ್ರೀ. ವೈಜನಾಥ ಪಾಟೀಲ್ (ನಗರಾಭಿವೃದ್ಧಿ ಸಚಿವರು) :

ಹುಬ್ಬಳ್ಳಿ-ಧಾರವಾಡ ನಗರಗಳಿಗೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ಹುಬ್ಬಳ್ಳಿ ಧಾರವಾಡ ಮಹಾನಗರ ಸಭೆಗೆ ಸಗಟು (ಬಲ್ಕ್) ನೀರು ಸರಬರಾಜು ಮಾಡುತ್ತಿರುವ, ಕುಡಿಯುವ ನೀರಿನ ವಿತರಣೆಯನ್ನು ಹುಬ್ಬಳ್ಳಿ-ಧಾರವಾಡ ಮಹಾನಗರ ಸಭೆಯವರು ನಿರ್ವಹಿಸುತ್ತಿದ್ದಾರೆ. ಒಳಚರಂಡಿ ವ್ಯವಸ್ಥೆ ಕೂಡ ಮಹಾನಗರ ಸಭೆಯ ಉಸ್ತುವಾರಿಯಲ್ಲಿದೆ. ವಿದ್ಯುತ್ ಪೋಲ್ಟೆಜ್ ಕೊರತೆಯಿಂದಾಗಿ ಸ್ವಲ್ಪಮಟ್ಟಿಗೆ ನೀರು ಸರಬರಾಜಿನಲ್ಲಿ ವ್ಯತ್ಯಾಸವಾಗಿದೆ.

ಆ. ಇಲ್ಲ

ಇ. ಬಂದಿದೆ.

ಈ. ಹುಬ್ಬಳ್ಳಿ-ಧಾರವಾಡ ನಗರಗಳಿಗೆ ಕುಡಿಯುವ ನೀರಿನ ಸಮಸ್ಯೆಯನ್ನು ಉತ್ತಮಪಡಿಸಲು ಸರ್ಕಾರವು ಈ ಕೆಳಕಂಡ ಯೋಜನೆಗಳನ್ನು ಕೈಗೊಂಡಿದೆ.

ಅ. -ನಗರಗಳ ವಿತರಣಾ ವ್ಯವಸ್ಥೆಯ ನವೀಕರಣಕ್ಕಾಗಿ 700 ಲಕ್ಷಗಳ ಅಂದಾಜಿನ ಯೋಜನೆ ಹಾಗೂ